# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 340 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಸಕ್ಕರೆ ಸಚಿವರು |
| ಉತ್ತರಿಸುವ ದಿನಾಂಕ | : | 12.12.2018 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಿದರೆ, 2014-19 ನೇ ಕೈಗಾರಿಕಾ ನೀತಿ ಅಡಿ ಹೆಚ್ಚಿನ ರಿಯಾಯಿತಿ ಹಾಗೂ ಸೌಲಭ್ಯಗಳನ್ನು ನೀಡಲಾಗುತ್ತಿದೆ. |
| ಆ) | ಕಳೆದ ಮೂರು ವರ್ಷಗಳಿಂದ ರಾಯಚೂರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕೆಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ರಾಯಚೂರು ಜಿಲ್ಲೆಯಲ್ಲಿ ಬಂಡವಾಳ ಹೂಡಲು ಉದ್ದೇಶ ಹೊಂದಿರುವ ಖಾಸಗಿ ಬಂಡವಾಳ ಯೋಜನೆಗಳಿಗೆ ಕಳೆದ ಮೂರು ವರ್ಷಗಳಿಂದ ಅಂದರೆ ದಿನಾಂಕ 01.04.2015 ರಿಂದ 06.12.2018 ರವರಗೆ ಏಕ ಗವಾಕ್ಷಿ ಸಮಿತಿಯ ಮೂಲಕ ನೀಡಲಾಗಿರುವ ಅನುಮೋದನೆಗಳು ಈ ಕೆಳಕಂಡಂತೆ ನೀಡಿದೆ:<br><br>1. ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಸಭೆಯಲ್ಲಿ ಒಂದು ಯೋಜನೆಗೆ ರೂ.156.25 ಕೋಟಿಗಳ ಬಂಡವಾಳ ಹೂಡಿಕೆ ಮಾಡಲು ಅನುಮೋದನೆ ನೀಡಿದೆ. ಇದರಿಂದ ಸುಮಾರು 172 ಉದ್ಯೋಗಗಳು ಸೃಷ್ಠಿಯಾಗಲಿವೆ.<br>2. ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಒಟ್ಟು 22 ಯೋಜನೆಗಳಿಗೆ ರೂ.782.11 ಕೋಟಿಗಳ ಬಂಡವಾಳ ಹೂಡಿಕೆ ಮಾಡಲು ಅನುಮೋದನೆ ನೀಡಿದೆ. ಇದರಿಂದ ಸುಮಾರು 827 ಉದ್ಯೋಗಗಳು ಸೃಷ್ಠಿಯಾಗಲಿವೆ. |
| ಇ) | ರಾಯಚೂರು ನಗರ ಮತ್ತು ಮಾನ್ವಿ ಪಟ್ಟಣಗಳಲ್ಲಿ ಇರುವ ಕೆ.ಐ.ಎ.ಡಿ.ಬಿ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ರಾಯಚೂರು ತಾಲ್ಲೂಕಿನ ರಾಯಚೂರು ಕೈಗಾರಿಕಾ ಪ್ರದೇಶದಲ್ಲಿ 2015-16ನೇ ಸಾಲಿನಲ್ಲಿ ಮೂಲಭೂತ ಸೌಕರ್ಯಗಳ ಉನ್ನತೀಕರಣ ಕಾಮಗಾರಿಗಳನ್ನು ರೂ.10.00 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿ ಮುಕ್ತಾಯಗೊಂಡಿರುತ್ತದೆ.<br><br>ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿನ ಮಾನ್ವಿ ಕೈಗಾರಿಕಾ ಪ್ರದೇಶದಲ್ಲಿ 2016-17ನೇ ಸಾಲಿನಲ್ಲಿ ಮೂಲಭೂತ ಸೌಕರ್ಯಗಳ ಉನ್ನತೀಕರಣ ಕಾಮಗಾರಿಗಳನ್ನು ರೂ. 3.00 ಕೋಟಿ ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ಕಾಮಗಾರಿ ಮುಕ್ತಾಯದ ಹಂತದಲ್ಲಿರುತ್ತದೆ. |

ಸಿಐ 219 ಎಸ್‌ಪಿಐ 2018

(ಕೆ.ಜೆ. ಜಾರ್ಜ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಸಕ್ಕರೆ ಸಚಿವರು